**ಪತ್ರಿಕಾ ಪ್ರಕಟಣೆ**

ಕೋವಿಡ್-19ರ ಸಂಬಂಧ ದಿನಾಂಕ: 06-05-2020ರ ಪತ್ರಿಕಾಗೋಷ್ಠಿಯಲ್ಲಿ ಮಾನ್ಯ ಮುಖ್ಯ ಮಂತ್ರಿಗಳು ಆಟೋ ಹಾಗೂ ಟ್ಯಾಕ್ಸಿ ಚಾಲಕರುಗಳಿಗೆ ಒಂದು ಬಾರಿ ಪರಿಹಾರವಾಗಿ ರೂ 5,000/- ಗಳನ್ನು ನೀಡಲು ನಿರ್ಧರಿಸಿರುವುದಾಗಿ ಘೋಷಿಸಿರುತ್ತಾರೆ. ಈ ಪರಿಹಾರ ಧನವನ್ನು ಪಡೆಯಲು ಆಟೋರಿಕ್ಷಾ/ಟ್ಯಾಕ್ಸಿ ಚಾಲಕರುಗಳು ಪೋಸ್ಟ್ ಆಫೀಸ್‌ಗಳ ಎದುರಿಗೆ ಕ್ಯೂಗಳಲ್ಲಿ ನಿಂತು ಅರ್ಜಿಗಳನ್ನು ಕಳುಹಿಸಲು ಪ್ರಯತ್ನಿಸುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಪರಿಹಾರ ಧನ ನೀಡಲು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ **"ಸೇವಾಸಿಂಧು"** ಪೋರ್ಟಲ್‌ನ ಮೂಲಕ ಸ್ವೀಕರಿಸುವ ವ್ಯವಸ್ಥೆ ಮಾಡಲಾಗುತ್ತಿದೆ. ಆದ್ದರಿಂದ ಆಟೋರಿಕ್ಷಾ/ಟ್ಯಾಕ್ಸಿ ಚಾಲಕರುಗಳು ಅರ್ಜಿಗಳನ್ನು ಸಲ್ಲಿಸಲು ಅನಾವಶ್ಯಕವಾಗಿ ಪರಿಶ್ರಮ ಪಡುವ ಅವಶ್ಯಕತೆ ಇರುವುದಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿಸಲ್ಲಿಸುವ ಎಲ್ಲಾ ಅರ್ಹ ಆಟೋ/ಟ್ಯಾಕ್ಸಿ ಚಾಲಕರುಗಳಿಗೆ ಪರಿಹಾರ ಧನವನ್ನು ಅವರ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಆದ್ದರಿಂದ ಈ ಬಗ್ಗೆ ಯಾವುದೇ ಆತಂಕಕ್ಕೆ ಒಳಗಾಗಬಾರದೆಂದು ಕೋರಲಾಗಿದೆ.

ದಿನಾಂಕ: 08-05-2020

ಆಯುಕ್ತರು 08/05/2020

ಸಾರಿಗೆ ಮತ್ತು ರಸ್ತೆ ಸುರಕ್ಷತೆ

ಬೆಂಗಳೂರು

Scanned with CamScanner